# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2090 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ |
| ಉತ್ತರಿಸಬೇಕಾದ ದಿನಾಂಕ | : | 17.03.2022 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಖಾಸಗಿ ಅನುದಾನಿತ ಪ್ರೌಢ, ಪದವಿಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ 2015ರ ಪೂರ್ವದಲ್ಲಿ ನಿವೃತ್ತಿ, ನಿಧನದಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಈ ಹಿಂದೆ ಆರ್ಥಿಕ ಇಲಾಖೆ ಅನುಮತಿ ನೀಡಿದ್ದು ಕೋವಿಡ್ ಹಿನ್ನಲೆಯಲ್ಲಿ ಈ ಅನುಮತಿಗೆ ತಡಯಾಜ್ಞೆ ನೀಡಿರುವುದು ನಿಜವೇ; (ಮಾಹಿತಿ ನೀಡುವುದು) | ಹೌದು<br>ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಸಲುವಾಗಿ ಲಾಕ್‌ಡೌನ್ ಜಾರಿ ಮಾಡಿದ್ದರಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿದ್ದುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಮತ್ತು ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವುದು ಅನಿವಾರ್ಯವಾಗಿದ್ದುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ವೇತನಾನುದಾನಕ್ಕೆ ಒಳಪಡಿಸುವ ಕುರಿತಂತೆ ನಿರ್ಬಂಧ ವಿಧಿಸಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10-06-2020ರಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ. |
| (ಆ) | ಸದರಿ ತಡೆಯಾಜ್ಞೆಯನ್ನು ಸರ್ಕಾರ ಯಾವಾಗ ಹಿಂಪಡೆಯಲಾಗುತ್ತದೆ; | ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದ ನಂತರ ಈ ಸಂಬಂಧ ಪರಿಶೀಲಿಸಲಾಗುವುದು. |
| (ಇ) | 2015ರ ನಂತರ ನಿವೃತ್ತಿ, ನಿಧನದಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ದಿನಾಂಕ:31.12.2015ರ ಅಂತ್ಯಕ್ಕೆ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ಇತ್ಯಾದಿ ಕಾರಣಗಳಿಂದಾಗಿ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಈಗಾಗಲೇ ಅನುಮತಿಸಿರುವ ಪ್ರಕರಣಗಳಲ್ಲಿ ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಂಡಿರುವುದಿಲ್ಲ. ಆದುದರಿಂದ, 2015ರ ನಂತರ ಉಂಟಾಗಿರುವ ಖಾಲಿ ಹುದ್ದೆಗಳ ಭರ್ತಿಗೆ ಅನುಮತಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಆಇ 234 ವೆಚ್ಚ-8/2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CYO JS(GJ), JOINT SECRETARY, CMO on 17/03/2022 11:23 AM